ಕನ್ನಡಪ್ರಭ
22.08.2016

# ಆನ್‌ಲೈನ್ ವ್ಯವಸ್ಥೆಗೆ ಪ್ರಶಸ್ತಿ

**ಬೆಂಗಳೂರು:** ಕರ್ನಾಟಕದ ಕೃಷಿ ಉತ್ಪನ್ನ ಮಾರಾಟಕ್ಕೆ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ನಿರ್ವಹಿಸುವ ರೆಮ್ಸ್ ಸಂಸ್ಥೆಗೆ ಕ್ವಾಲಿಟಿ ಕೌನ್ಸಿಲ್ ಆಫ್ ಇಂಡಿಯಾದ ಪ್ರತಿಷ್ಠಿತ ಡಿಎಲ್ ಶಾ-ಪ್ಲಾಟಿನಂ ಪ್ರಶಸ್ತಿ ಲಭಿಸಿದೆ.

ದೆಹಲಿಯಲ್ಲಿ ನಡೆದ 11ನೇ ರಾಷ್ಟ್ರೀಯ ಕ್ವಾಲಿಟಿ ಕಾನ್‌ಕ್ಲೇವ್ ಸಮಾರಂಭದಲ್ಲಿ ಕೇಂದ್ರ ವಿಮಾನಯಾನ ಖಾತೆ ಸಚಿವ ಜಯಂತ್ ಸಿನ್ಹಾ ಅವರಿಂದ ಕರ್ನಾಟಕ ಸರ್ಕಾರದ ಅಪರ ಕಾರ್ಯದರ್ಶಿ ಮನೋಜ್ ರಾಜನ್ ಪ್ರಶಸ್ತಿ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ವಿಶ್ವದ ಪ್ರತಿಷ್ಠಿತ ಕಂಪನಿಗಳ ಮುಖ್ಯಸ್ಥರು, ಖಾಸಗಿ ಸಂಸ್ಥೆಗಳ ಪ್ರತಿನಿಧಿಗಳು, ಸರ್ಕಾರಿ ಸ್ವಾಮ್ಯದ ಕಂಪನಿಗಳು, ವಿಜ್ಞಾನ ಮತ್ತು ತಂತ್ರಜ್ಞಾನದ ಪರಿಣಿತ ಸಂಸ್ಥೆಗಳು, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಶಿಕ್ಷಣ ತಜ್ಞರು ಭಾಗವಹಿಸಿದ್ದರು.